ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

# ಪತ್ರಿಕಾ ತುಣುಕುಗಳು
# PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE : 07/1/2020

ಸಂ.ಕ 7/1/20

## ಫೆ. 1 ಕೇಂದ್ರ ಬಜೆಟ್ ಮಂಡನೆ

ನವದೆಹಲಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಫೆ.1ರಂದು 2020-21ನೇ ಸಾಲಿನ ಬಜೆಟ್ ಮಂಡಿಸಲಿದ್ದು, ಆರ್ಥಿಕ ಹಿನ್ನಡೆಯ ಅನುಭವಿಸುತ್ತಿರುವ ಸಂದರ್ಭದಲ್ಲಿ ಏನೆಲ್ಲ ಕ್ರಮಗಳನ್ನು ಪ್ರಕಟಿಸಬಹುದು ಎನ್ನುವ ಕುತೂಹಲದ ಮತ್ತು ನಿರೀಕ್ಷೆ ಎಲ್ಲ ವರ್ಗಗಳ ಜನರಲ್ಲಿದೆ.

ಕಳೆದ ವರ್ಷ ಜುಲೈ ತಿಂಗಳಲ್ಲಿ ಆರ್ಥಿಕ ಹಿನ್ನಡೆಯನ್ನು ತಡೆಗಟ್ಟಲು ಕಾರ್ಪೊರೇಟ್ ತೆರಿಗೆ ಕಡಿಮೆಗೊಳಿಸಿ ಅಚ್ಚರಿಯುಂಟುಮಾಡಿದ್ದರು. ಇದು ಸರ್ಕಾರಕ್ಕೆ 1.45 ಲಕ್ಷ ಕೋಟಿ ರೂ. ಹೊರೆಯಾಗಿತ್ತು. ಇದನ್ನು ಹೇಗೆ ಸರಿದೂಗಿಸಬಲ್ಲರು ಎನ್ನುವುದು ಕುತೂಹಲಕ್ಕೆ ಕಾರಣವಾಗಿದೆ.

ಮುಖ್ಯ ಆರ್ಥಿಕ ಸಲಹೆಗಾರ ಕೃಷ್ಣಮೂರ್ತಿ ಸುಬ್ರಮಣ್ಯನ್ ಜ.31ರಂದು ಆರ್ಥಿಕ ಸಮೀಕ್ಷೆಯನ್ನು ಮಂಡಿಸಲಿದ್ದಾರೆ.